All India Radio: Bangalore
National Bulletin In Kannada
05.03.2026 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
<><><><>

ಮುಖ್ಯಾಂಶಗಳು

1. ನವದೆಹಲಿಯಲ್ಲಿಂದು ಪ್ರಧಾನಿ ನರೇಂದ್ರ ಮೋದಿ - ಫಿನ್‌ಲ್ಯಾಂಡ್ ಅಧ್ಯಕ್ಷರ ನಡುವೆ ದ್ವಿಪಕ್ಷೀಯ ಮಾತುಕತೆ
2. ಹತ್ತು ರಾಜ್ಯಗಳ ೩೭ ರಾಜ್ಯಸಭಾ ಸ್ಥಾನಗಳಿಗೆ ನಾಮಪತ್ರ ಸಲ್ಲಿಕೆಗೆ ಇಂದು ಕೊನೆಯ ದಿನ
3. ಪಶ್ಚಿಮ-ಏಷ್ಯಾ ಪರಿಸ್ಥಿತಿ ಮತ್ತಷ್ಟು ಉಲ್ಬಣ ; ಇಸ್ರೇಲ್-ಅಮೆರಿಕ ಜಂಟಿ ಪಡೆ ಹಾಗೂ ಇರಾನ್ ನಡುವೆ ಮುಂದುವರಿದ ಸಂಘರ್ಷ
4. ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಕರ್ನಾಟಕ ಭೇಟಿ ; ಬೆಳಗಾವಿಯಲ್ಲಿ ಧಾರ್ಮಿಕ ಕಾರ್ಯಕ್ರಮವೊಂದರಲ್ಲಿ ಭಾಗಿ
5. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್ ; ಮೊದಲ ಸೆಮಿಫೈನಲ್‌ನಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ಗೆದ್ದು ಫೈನಲ್ ಪ್ರವೇಶಿಸಿದ ನ್ಯೂಜಿಲೆಂಡ್

<><><><>

ಭಾರತ ಮತ್ತು ಫಿನ್‌ಲ್ಯಾಂಡ್ ನಡುವಿನ ದ್ವಿಪಕ್ಷೀಯ ಬಾಂಧವ್ಯವನ್ನು ಬಲಪಡಿಸುವ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಫಿನ್‌ಲ್ಯಾಂಡ್ ಅಧ್ಯಕ್ಷ ಅಲೆಕ್ಸಾಂಡರ್ ಸ್ಟಬ್ ನವದೆಹಲಿಯಲ್ಲಿ ಇಂದು ಮಹತ್ವದ ಮಾತುಕತೆ ನಡೆಸಲಿದ್ದಾರೆ. ಈ ಸಭೆಯಲ್ಲಿ ಉಭಯ ನಾಯಕರು ವಿವಿಧ ಕ್ಷೇತ್ರಗಳಲ್ಲಿನ ಸಹಕಾರದ ಕುರಿತು ಸುದೀರ್ಘ ಚರ್ಚೆ ನಡೆಸಲಿದ್ದು, ಪ್ರಾದೇಶಿಕ ಹಾಗೂ ಜಾಗತಿಕ ಹಿತಾಸಕ್ತಿಯ ವಿಷಯಗಳ ಬಗ್ಗೆಯೂ ವಿಚಾರ ವಿನಿಮಯ ಮಾಡಿಕೊಳ್ಳಲಿದ್ದಾರೆ. ಚರ್ಚೆಯ ನಂತರ ಹಲವು ಪ್ರಮುಖ ಸಾಮೂಹಿಕ ತಿಳುವಳಿಕಾ ಒಪ್ಪಂದಗಳಿಗೆ ಸಹಿ ಹಾಕಲಾಗುವುದು. ಫಿನ್‌ಲ್ಯಾಂಡ್ ಅಧ್ಯಕ್ಷರ ಗೌರವಾರ್ಥವಾಗಿ ಪ್ರಧಾನಿ ನರೇಂದ್ರ ಮೋದಿ ಭೋಜನಕೂಟವನ್ನು ಏರ್ಪಡಿಸಿದ್ದಾರೆ. ಅಧ್ಯಕ್ಷ ಅಲೆಕ್ಸಾಂಡರ್ ಸ್ಟಬ್, ನಾಲ್ಕು ದಿನಗಳ ಭಾರತ ಪ್ರವಾಸಕ್ಕಾಗಿ ನಿನ್ನೆ ನವದೆಹಲಿಗೆ ಆಗಮಿಸಿದ್ದು, ಅವರನ್ನು ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವ ಕೀರ್ತಿ ವರ್ಧನ್ ಸಿಂಗ್ ಬರಮಾಡಿಕೊಂಡರು. ವಿಮಾನ ನಿಲ್ದಾಣದಲ್ಲಿ ಅವರಿಗೆ ಸಾಂಪ್ರದಾಯಿಕ ಸ್ವಾಗತ ಕೋರಿ, ಗೌರವ

ವಂದನೆ ಸಲ್ಲಿಸಲಾಯಿತು. ಇದು ಅಲೆಕ್ಸಾಂಡರ್ ಸ್ಟಬ್, ಅಧ್ಯಕ್ಷರಾದ ನಂತರ ಭಾರತಕ್ಕೆ ನೀಡುತ್ತಿರುವ ಮೊದಲ ಅಧಿಕೃತ ಭೇಟಿಯಾಗಿದೆ. ಇಂದು ಅವರು ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಲಿದ್ದಾರೆ. ಇದರ ಜೊತೆಗೆ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಮತ್ತು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಕೂಡ ಅವರನ್ನು ಭೇಟಿ ಮಾಡಿ ಸಮಾಲೋಚನೆ ನಡೆಸಲಿದ್ದಾರೆ. ಇಂದು ಸಂಜೆ ನವದೆಹಲಿಯಲ್ಲಿ ನಡೆಯಲಿರುವ ೧೧ನೇ ರೈಸಿನಾ ಸಂವಾದ-೨೦೨೬ ಕಾರ್ಯಕ್ರಮದಲ್ಲಿ ಅಧ್ಯಕ್ಷ ಅಲೆಕ್ಸಾಂಡರ್ ಸ್ಟಬ್ ಮುಖ್ಯ ಅತಿಥಿಯಾಗಿ ಪಾಲ್ಗೊಂಡು, ಪ್ರಮುಖ ಭಾಷಣ ಮಾಡಲಿದ್ದಾರೆ. ಭಾರತ ಮತ್ತು ಫಿನ್‌ಲ್ಯಾಂಡ್ ರಾಷ್ಟ್ರಗಳು ಹಂಚಿಕೆಯ ಪ್ರಜಾಪ್ರಭುತ್ವ ಮೌಲ್ಯಗಳ ಸೌಹಾರ್ದಯುತ ಬಾಂಧವ್ಯವನ್ನು ಹೊಂದಿದ್ದು, ಐರೋಪ್ಯ ಒಕ್ಕೂಟದಲ್ಲಿ ಫಿನ್‌ಲ್ಯಾಂಡ್ ಭಾರತದ ಪ್ರಮುಖ ಪಾಲುದಾರ ರಾಷ್ಟ್ರವಾಗಿದೆ.

<><><><>

ಒಟ್ಟು ಹತ್ತು ರಾಜ್ಯಗಳ ೩೭ ರಾಜ್ಯಸಭಾ ಸ್ಥಾನಗಳಿಗೆ ನಡೆಯಲಿರುವ ದ್ವಿವಾರ್ಷಿಕ ಚುನಾವಣೆಯ ನಾಮಪತ್ರ ಸಲ್ಲಿಕೆ ಪ್ರಕ್ರಿಯೆಯು ಇಂದು ಮುಕ್ತಾಯಗೊಳ್ಳಲಿದೆ. ಚುನಾವಣಾ ವೇಳಾಪಟ್ಟಿಯ ಪ್ರಕಾರ, ಸಲ್ಲಿಕೆಯಾದ ನಾಮಪತ್ರಗಳ ಪರಿಶೀಲನೆಯು ನಾಳೆ ನಡೆಯಲಿದ್ದು, ಅಭ್ಯರ್ಥಿಗಳು ತಮ್ಮ ನಾಮಪತ್ರಗಳನ್ನು ಹಿಂಪಡೆಯಲು ಇದೇ ೯ ರವರೆಗೆ ಕಾಲಾವಕಾಶವಿದೆ. ಈ ಎಲ್ಲಾ ಸ್ಥಾನಗಳಿಗೆ ಇದೇ ೧೬ರಂದು ಮತದಾನ ನಡೆಯಲಿದ್ದು, ಅದೇ ದಿನ ಸಂಜೆ ಫಲಿತಾಂಶವನ್ನು ಪ್ರಕಟಿಸಲಾಗುವುದು. ಛತ್ತೀಸ್‌ಗಢದಿಂದ ನಿವೃತ್ತರಾಗುತ್ತಿರುವ ಇಬ್ಬರು ಸದಸ್ಯರ ಸ್ಥಾನಕ್ಕೆ ಲಕ್ಷ್ಮಿ ವರ್ಮಾ ಅವರನ್ನು ಭಾರತೀಯ ಜನತಾ ಪಕ್ಷದ ಅಭ್ಯರ್ಥಿಯನ್ನಾಗಿ ಕಣಕ್ಕಿಳಿಸಲಾಗಿದೆ. ಮಹಾರಾಷ್ಟ್ರ, ತಮಿಳುನಾಡು, ಪಶ್ಚಿಮ ಬಂಗಾಳ, ಬಿಹಾರ ಮತ್ತು ಒಡಿಶಾದಂತಹ ಪ್ರಮುಖ ರಾಜ್ಯಗಳಲ್ಲಿ ಈ ಚುನಾವಣೆ ನಡೆಯುತ್ತಿದ್ದು, ಆಯಾ ರಾಜ್ಯಗಳ ವಿಧಾನಸಭೆಯ ಸಂಖ್ಯಾಬಲದ ಆಧಾರದ ಮೇಲೆ ಅಭ್ಯರ್ಥಿಗಳ ಆಯ್ಕೆ ನಿರ್ಧಾರವಾಗಲಿದೆ.

<><><><>

ಭಾರತದ ಪ್ರಮುಖ ಭೌಗೋಳಿಕ ರಾಜಕೀಯ ಮತ್ತು ಆರ್ಥಿಕ ಸಮ್ಮೇಳನವಾದ ರೈಸಿನಾ ಸಂವಾದದ ೧೧ನೇ ಆವೃತ್ತಿಗೆ ನವದೆಹಲಿಯಲ್ಲಿ ಇಂದು ಚಾಲನೆ ದೊರೆಯಲಿದೆ. ಮೂರು ದಿನಗಳ ಕಾಲ ನಡೆಯಲಿರುವ ಈ ಜಾಗತಿಕ ಸಮ್ಮೇಳನದಲ್ಲಿ ವಿಶ್ವದ ವಿವಿಧ ದೇಶಗಳ ನಾಯಕರು, ನೀತಿ ನಿರೂಪಕರು ಮತ್ತು ತಜ್ಞರು ಒಂದೇ ವೇದಿಕೆಯಡಿ ಒಟ್ಟು ಗೂಡಲಿದ್ದು, ಪ್ರಸಕ್ತ ಅಂತಾರಾಷ್ಟ್ರೀಯ

ಸವಾಲುಗಳು ಮತ್ತು ಕಾರ್ಯತಂತ್ರದ ಸಹಕಾರದ ಕುರಿತು ಸುದೀರ್ಘ ಚರ್ಚೆ ನಡೆಸಲಿದ್ದಾರೆ. ೨೦೨೬ರ ಈ ಆವೃತ್ತಿಯು 'ಸಂಸ್ಕಾರ - ಪ್ರತಿಪಾದನೆ, ಹೊಂದಾಣಿಕೆ, ಪ್ರಗತಿ' ಎಂಬ ಪರಿಕಲ್ಪನೆಯಡಿ ನಡೆಯುತ್ತಿದ್ದು, ಇದು ಪ್ರಸ್ತುತ ಜಾಗತಿಕ ವಿದ್ಯಮಾನಗಳ ಪ್ರತಿಬಿಂಬವಾಗಿದೆ. ಅಬ್ಸರ್ವರ್ ರಿಸರ್ಚ್ ಫೌಂಡೇಶನ್ ಮತ್ತು ಭಾರತ ಸರ್ಕಾರದ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಸಹಯೋಗದೊಂದಿಗೆ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ೨೦೧೬ರಲ್ಲಿ ಪ್ರಾರಂಭವಾದ ರೈಸಿನಾ ಡೈಲಾಗ್, ಕಳೆದ ಒಂದು ದಶಕದಲ್ಲಿ ಅಂತಾರಾಷ್ಟ್ರೀಯ ವ್ಯವಹಾರಗಳ ಕುರಿತಾದ ಚರ್ಚೆಗಳಿಗೆ ಭಾರತದ ಅತ್ಯುನ್ನತ ವೇದಿಕೆಯಾಗಿ ಹೊರಹೊಮ್ಮಿದೆ. ಬದಲಾಗುತ್ತಿರುವ ಭೌಗೋಳಿಕ ರಾಜಕೀಯ ಸಮೀಕರಣಗಳು, ಹವಾಮಾನ ವೈಪರೀತ್ಯದ ಆತಂಕಗಳು, ತಾಂತ್ರಿಕ ಪರಿವರ್ತನೆಗಳು, ಮತ್ತು ಜಾಗತಿಕ ಆಡಳಿತ ಚೌಕಟ್ಟಿನ ಭವಿಷ್ಯ ಸೇರಿದಂತೆ ವಿವಿಧ ವಿಷಯಗಳ ಮೇಲೆ ಚರ್ಚೆಗೆ ಈ ಸಮ್ಮೇಳನ ವೇದಿಕೆಯಾಗಿದೆ.

<><><><>

ಪಶ್ಚಿಮ ಏಷ್ಯಾದಲ್ಲಿ ಸಂಘರ್ಷವು ಭೀಕರ ಸ್ವರೂಪ ಪಡೆದಿದ್ದು, ಇಸ್ರೇಲ್ ಮತ್ತು ಅಮೆರಿಕದ ಜಂಟಿ ಪಡೆಗಳು ಇರಾನ್‌ನ ಬ್ಯಾಲಿಸ್ಟಿಕ್ ಕ್ಷಿಪಣಿ ಸರಣಿ ಹಾಗೂ ಟೆಹ್ರಾನ್‌ನಲ್ಲಿರುವ ಐಆರ್‌ಜಿಸಿ ಮತ್ತು ಬಸಿಜ್ ಸೇರಿದಂತೆ ಪ್ರಮುಖ ಸೇನಾ ಕಮಾಂಡ್ ಕೇಂದ್ರಗಳ ಮೇಲೆ ದಾಳಿಗಳನ್ನು ನಡೆಸಿವೆ. ಅಮೆರಿಕದ ವಾಯುಪಡೆಯು 'ಆಪರೇಷನ್ ಎಪಿಕ್ ಫ್ಯೂರಿ' ಅಡಿಯಲ್ಲಿ ಮೊದಲ ಬಾರಿಗೆ ದೀರ್ಘ ವ್ಯಾಪ್ತಿಯ ನಿಖರ ದಾಳಿ ಕ್ಷಿಪಣಿ ಬಳಸಿದ್ದು, ಇದುವರೆಗೆ ಇರಾನ್‌ನ ೨೦ಕ್ಕೂ ಹೆಚ್ಚು ಯುದ್ಧನೌಕೆಗಳನ್ನು ಮುಳುಗಿಸಿದೆ. ಈ ಯುದ್ಧದಲ್ಲಿ ಅಮೆರಿಕ ಮತ್ತು ಇಸ್ರೇಲ್ ಅತ್ಯಂತ ಬಲಿಷ್ಠ ಸ್ಥಿತಿಯಲ್ಲಿವೆ ಎಂದು ಅಧ್ಯಕ್ಷ ಡೋನಾಲ್ಡ್ ಟ್ರಂಪ್ ಹೇಳಿದ್ದಾರೆ. ಮತ್ತೊಂದೆಡೆ, ಇರಾನ್ ಎಸೆದಿದ್ದ ನೂರಾರು ಡ್ರೋನ್ ಮತ್ತು ಕ್ಷಿಪಣಿಗಳನ್ನು ಯುನೈಟೆಡ್ ಅರಬ್ ಎಮಿರೇಟ್ಸ್ ಮತ್ತು ಸೌದಿ ಅರೇಬಿಯಾ ಯಶಸ್ವಿಯಾಗಿ ಹೊಡೆದುರುಳಿಸಿವೆ. ಬಿಕ್ಕಟ್ಟು ತೀವ್ರಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಕತಾರ್ ತನ್ನ ದೇಶದಲ್ಲಿರುವ ಅಮೆರಿಕ ರಾಯಭಾರ ಕಚೇರಿಯ ಸುತ್ತಮುತ್ತಲಿನ ನಿವಾಸಿಗಳನ್ನು ಸ್ಥಳಾಂತರಿಸುತ್ತಿದ್ದರೆ, ಜಿಸಿಸಿ ರಾಷ್ಟ್ರಗಳು ಪ್ರಾದೇಶಿಕ ಭದ್ರತೆಯ ಕುರಿತು ತುರ್ತು ಸಭೆ ನಡೆಸಿವೆ.

<><><><>

ಪಶ್ಚಿಮ-ಏಷ್ಯಾ ಮತ್ತು ಗಲ್ಫ್ ರಾಜ್ಯದಲ್ಲಿ ಉಂಟಾಗಿರುವ ಉದ್ವಿಘ್ನ ಪರಿಸ್ಥಿತಿಯ ಹಿನ್ನೆಲೆಯಲ್ಲಿ ಭಾರತದ ವಿದೇಶಾಂಗ ವ್ಯವಹಾರಗಳ ಸಚಿವಾಲಯ ತುರ್ತು ನಿಯಂತ್ರಣಾ ಕೊಠಡಿಯನ್ನು

ಸ್ಥಾಪಿಸಿದೆ. ಸಂಘರ್ಷ ಪೀಡಿತ ಪ್ರದೇಶಗಳಲ್ಲಿರುವ ಭಾರತೀಯ ನಾಗರಿಕರ ನೆರವಿಗಾಗಿ ಈ ಕ್ರಮ ಕೈಗೊಳ್ಳಲಾಗಿದ್ದು, ಸಾರ್ವಜನಿಕರು ಬೆಳಗ್ಗೆ ೯ರಿಂದ ರಾತ್ರಿ ೯ರವರೆಗೆ ೧೮೦೦-೧೧೮೭೯೭ ಅಥವಾ ೦೧೧-೨೩೦೧-೨೧೧೩ ಹಾಗೂ ೦೧೧-೨೩೦೧-೭೯೦೫ ಸಹಾಯವಾಣಿ ಸಂಖ್ಯೆಗಳನ್ನು ಸಂಪರ್ಕಿಸಬಹುದಾಗಿದೆ.

<><><>

ಪಶ್ಚಿಮ ಏಷ್ಯಾದಲ್ಲಿನ ಪರಿಸ್ಥಿತಿಯ ನಡುವೆಯೇ ಹೆಚ್ಚಿದ ಬೇಡಿಕೆಯನ್ನು ಗಮನದಲ್ಲಿಟ್ಟು ಟೊರಾಂಟೋ, ಫ್ರಾಂಕ್‌ಫರ್ಟ್ ಮತ್ತು ಪ್ಯಾರಿಸ್ ನಗರಗಳಿಗೆ ಹೆಚ್ಚುವರಿ ವಿಮಾನಗಳನ್ನು ಕಾರ್ಯಗತಗೊಳಿಸಲಾಗುವುದು ಎಂದು ಏರ್ ಇಂಡಿಯಾ ತಿಳಿಸಿದೆ. ದೆಹಲಿ-ಟೊರಾಂಟೋ ನಡುವೆ ಇದೇ ೧೧ರವರೆಗೆ ಮೂರು ಹೆಚ್ಚುವರಿ ವಿಮಾನಗಳು, ೭ರಿಂದ ೧೦ರವರೆಗೆ ದೆಹಲಿ-ಫ್ರಾಂಕ್‌ಫರ್ಟ್ ನಡುವೆ ಮೂರು ಮತ್ತು ದೆಹಲಿ-ಪ್ಯಾರಿಸ್ ನಡುವೆ ಒಂದು ವಿಮಾನ ಸಂಚರಿಸಲಿವೆ. ಏರ್ ಇಂಡಿಯಾ ಎಕ್ಸ್‌ಪ್ರೆಸ್ ರಾಸ್ ಅಲ್ ಖೈಮಾದಿಂದ ದೆಹಲಿ, ಕೊಚ್ಚಿ ಹಾಗೂ ಮುಂಬೈಗೆ ವಿಶೇಷ ವಿಮಾನಗಳು ಸಂಚರಿಸಲಿದ್ದು, ಮಸ್ಕಟ್ ಮಾರ್ಗದಲ್ಲೂ ಹೆಚ್ಚುವರಿ ಸೇವೆಗಳನ್ನು ಮುಂದುವರಿಸಲಾಗುವುದು. ಪ್ರಯಾಣಿಕರು ವಿಮಾನ ಸೇವೆಯ ಸ್ಥಿತಿಯನ್ನು ಪರಿಶೀಲಿಸುವಂತೆ ವಿಮಾನ ಸಂಸ್ಥೆ ಸಲಹೆ ನೀಡಲಾಗಿದೆ.

<><><>

ಪಶ್ಚಿಮ ಏಷ್ಯಾದ ಮುಂದುವರಿದಿರುವ ಪರಿಸ್ಥಿತಿಯ ಹಿನ್ನೆಲೆದಲ್ಲಿ ಪ್ರಯಾಣಿಕರಿಗೆ ಉಚಿತವಾಗಿ ಪ್ರಯಾಣ ಮರುನಿಗದಿ ಅಥವಾ ರದ್ದಾದ ಟಿಕೆಟ್‌ಗೆ ಸಂಪೂರ್ಣ ಹಣ ಮರುಪಾವತಿ ಸೌಲಭ್ಯವನ್ನು ಏರ್ ಇಂಡಿಯಾ ಘೋಷಿಸಿದೆ. ಫೆಬ್ರವರಿ ೨೮ರೊಳಗೆ ಬುಕ್ ಮಾಡಿರುವ ಮತ್ತು ಇದೇ ೧೦ರವರೆಗೆ ಪಶ್ಚಿಮ ಏಷ್ಯಾ, ಯುಕೆ ಹಾಗೂ ಯುರೋಪ್ ಮಾರ್ಗಗಳ ಪ್ರಯಾಣಗಳಿಗೆ ಈ ಸೌಲಭ್ಯ ಲಭ್ಯವಿದೆ ಎಂದು ಸಂಸ್ಥೆ ತಿಳಿಸಿದೆ.

<><><>

ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಇಂದು ಕರ್ನಾಟಕ ಪ್ರವಾಸ ಕೈಗೊಳ್ಳಲಿದ್ದಾರೆ. ಬೆಳಗಾವಿ ಜಿಲ್ಲೆಯ ಹಿರೇಬಾಗೇವಾಡಿ ಸಮೀಪದ ವೀರಭದ್ರೇಶ್ವರ ದೇವಸ್ಥಾನದಲ್ಲಿ ಆಯೋಜಿಸಲಾಗಿರುವ ರಾಜಗೋಪುರ ಕಳಸಾರೋಹಣ ಮತ್ತು ಮಹಾಕುಂಭಾಭಿಷೇಕ ಮಹೋತ್ಸವದ ಉದ್ಘಾಟನಾ ಸಮಾರಂಭದಲ್ಲಿ ಅವರು ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ.

<><><><>

ಕೊಲ್ಕೊತ್ತಾದ ಈಡನ್ಸ್ ಗಾರ್ಡನ್ಸ್ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಮೊದಲ ಸೆಮಿಫೈನಲ್ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ತಂಡದ ವಿರುದ್ಧ ನ್ಯೂಜಿಲೆಂಡ್ ತಂಡ ೯ ವಿಕೆಟ್‌ಗಳ ಜಯ ಸಾಧಿಸಿ, ಫೈನಲ್‌ಗೆ ಲಗ್ಗೆ ಇಟ್ಟಿದೆ. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ದಕ್ಷಿಣ ಆಫ್ರಿಕಾ ನಿಗದಿತ ೨೦ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೧೬೯ ರನ್ ಗಳಿಸಿತು. ಪ್ರತ್ಯುತ್ತರವಾಗಿ ನ್ಯೂಜಿಲೆಂಡ್ ಕೇವಲ ೧೨.೫ ಓವರ್‌ಗಳಲ್ಲಿ ೧ ವಿಕೆಟ್ ನಷ್ಟಕ್ಕೆ ೧೭೩ ರನ್ ಗಳಿಸಿ ಗೆಲುವು ತನ್ನದಾಗಿಸಿಕೊಂಡಿತು. ನ್ಯೂಜಿಲೆಂಡ್ ಪರ ಫಿನ್ ಎಲೆನ್, ೩೩ ಎಸೆತಗಳಲ್ಲಿ ಸಿಡಿಸಿದ ಶತಕ ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>